ಸ್ಯ 1908—09ನೆ ಇಸವಿ ಮಿ॥ ಅರ್ಜಿ ನಂಬರ್ 746.

ಬೆಂಗಳೂರು ಕಂಟೋನ್ಮೇಲರ್ಸ್ ಆಫೀಸಿನಲ್ಲಿದ್ದು ಛವತಿಪಟ್ಟ ವೆಂಕಟರಾಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರರು ಬೆಂಗಳೂರು ನಗರ್ತರ ಪ್ಯಾಟೇಲಿರುವ ವೆಂಕಟ್ರಾಯರ ಹೆಂಡತಿ ಅಮ್ಮಕ್ಕಂಣೆವ್ಮ, ಮೃತಪಟ್ಟ ಸದರೀ ವೆಂಕಟರಾಯರಿಗೆ ಖಾಸಾ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ವಾಸಸ್ಥರಾಗಿ ಮೃತಪಟ್ಟ ವೆಂಕಟರಾಯರ ಜಿಂದಗಿ ಬಗ್ಯಾಗಿ ಬರತಕ್ಕ 480—0—0 ರೂಪಾಯಿಗಳನ್ನು ವಸೂಲ್ ಮಾಡುವದಕ್ಕೆ 1901ನೆ ಇಸವಿ 7ನೆ ರೆಗ್ಯುಲೇರ್ಷ ಪ್ರಕಾರ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಅಮ್ಮಕ್ಕಂಣೆವ್ಮನ ಅರ್ಜಿಯನ್ನು 1909ನೆ ಇಸವಿ ಮಾರ್ಚಿ 19ನೆ ತಾರೀಖಿನಲ್ಲಿ ಕೇಳಿ ಸರ್ಟಿಫಿಕೇಟ್ ಕೊಡಿಸುವತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟರಾಯರ ಆಸ್ತಿಗೆ ಹಕ್ಕುದಾರರಾದ ವಿಶಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1909ನೆ ಇಸವಿ ಮಾರ್ಚಿ ತಿಂಗಳು 2ನೆ ತಾರೀಖಿನಲ್ಲಿ ಕೋರ್ಟು ಮೊಹರ್ ನಿಶಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸ್ಯ 1908-09ನೆ ಇಸವಿ ಮಿ॥ ಅರ್ಜೀ ನಂಬರ್ 748.

ಚಿಕ್ಕಬಳ್ಳಾಪುರದ ತಾಲ್ಲೂಕು ನಂದಿ ಹೋಬಳಿ ಸುಲ್ತಾನ್‌ಪೇಟೇಲಿದ್ದು ಛವತಿಪಟ್ಟ ಮಾಳಂ ರುಕ್ಮಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರರು 2ನೆ ನೂಕಂ ಪುಟ್ಟೈಯ್ಯಶೆಟ್ಟ, 1ನೆ ಸುಬ್ಬರಾಯಶೆಟ್ಟ, 3ನೆ ರಾಮಸ್ವಾಮಿಶೆಟ್ಟ, 4ನೆ ಕೃಷ್ಣಯ್ಯಶೆಟ್ಟ, 5ನೆ ರಂಗೈಯಶೆಟ್ಟ, ಮೈನರ್, ಗಾರ್ಡಿಯರ್ ಸುಬ್ಬರಾಯಶೆಟ್ಟ, ಮೃತಪಟ್ಟ ಸದರೀ ರುಕ್ಮಯ್ಯನವರಿಗೆ ಖಾಸಾ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಸುಲ್ತಾನ್‌ಪೇಟೇಲಿ ವಾಸಸ್ಥರಾಗಿ ಮೃತಪಟ್ಟ ರುಕ್ಮಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ 6,900 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1901ನೆ ಇಸವಿ 7ನೆ ರೆಗ್ಯುಲೇರ್ಷ ಪ್ರಕಾರ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸುಬ್ಬರಾಯಶೆಟ್ಟ ವಗೈರೇರ ಅರ್ಜಿಯನ್ನು ಸ್ಯ 1909ನೆ ಇಸವಿ ಮಾರ್ಚಿ 19ನೆ ತಾರೀಖಿನಲ್ಲಿ ಕೇಳಿ ಸರ್ಟಿಫಿಕೇಟ್ ಪ್ರಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರುಕ್ಮಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಶಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1909ನೆ ಇಸವಿ ಮಾರ್ಚಿ 2ನೆ ತಾರೀಖಿನಲ್ಲಿ ಕೋರ್ಟು ಮೊಹರ್ ನಿಶಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ಇ. ಜಯರಾಮಯ್ಯರ್,
ಸಬ್ ಜಡ್ಜ್.

ಮೈಸೂರ ಗೆಜೆಟ್ ಚಂದಾದಾರು ವಗೈರೆ.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ಮುಂತಾವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲ್ ಮೈಸೂರು ಸೀಮೆ ಶಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲಿಷ್ ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲಿಷ್ ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚಪ್ಪ ವಾಹೇ ಯಾ ಕ್ವಾರ್ಟರಿಗೆ		ದಾವಣಿಪಾಯಿ ಪ್ರಕಾರ ದರಗಳು.
		ರೂ. ಆ.
ಚಾಲತಿ ವರುಷದ ಗೆಜೆಟಿ ಕಾಪಿ 1ಕ್ಕೆ, ರೆಗ್ಯುಲೇರ್ಷ ಯಾ ಆಕ್ಟ್ಟಗಳು ಯಾವದೂ ಇಲ್ಲದಿದ್ದರೆ.		0 8

ಹಿಂದಿನ ವರುಷದ ಗೆಜೆಟಿ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೆ ಇಸವಿ ಜುಲೈ 2ನೆ ಮುಕ್ಕಂ 155ನೆ ನಂಬರ್ ಉಳ್ಳ ಗವರ್ನಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ತನಕಯಲ್ಲಿನ ಪಟೇಲ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭಾವಿಕೆ ಕೆಲಸ ನೋಡುತಲಿಧಾರಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ಒಂದು ಸರಟಿಫಿಕೇಟನ್ನು ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೆ ಇಸವಿ ಜೂ॥ 21ನೆ ಮುಕ್ಕಂ 24205—6—ಜೆ. 6200ನೆ ನಂಬರ್ ಗವರ್ನಮೆಂಟ್ ಆರ್ಡರ್ ಅನುಸರಿಸಿ ವೇಲ್ಕಂಡ ರಿಯಾಯಿತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

1900ನೆ ಇಸವಿ ಆಗಸ್ಟು 21ನೆ ಮುಕ್ಕಂ 2633—41 ಮಿಸ್. 558ನೆ ನಂಬರ್ ಗವರ್ನಮೆಂಟ್ ಪ್ರೊಸೀಡಿಂಗ್ಸ್ ಅನುಸರಿಸಿ, ಮೈಸೂರು ದಸರಾ ರೆಪ್ರಜೆಂಟೇಟಿವ್ ಮೆಂಬರುಗಳಾಗಿರುವ ಕಾಲದ ವರಿಗೆ ಮಾತ್ರ ಸದರಿ ಮೆಂಬರುಗಳವರಿಗೆ ಇಂಗ್ಲಿಷ್ ಅಥವಾ ಕನ್ನಡ ಗೆಜೆಟ್ ಅರ್ಧ ಚಾರ್ಜಿಗೆ ಕೊಡಲ್ಪಡುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1901ನೆ ಇಸವಿ VIIನೆ ರೆಗ್ಯುಲೇಷನ ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸುಗಳು :—

	ರೂ.	ಆ.
ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಯೆ ಇಂಗ್ಲೀಷು ಅಥವಾ ಕನ್ನಡ ..	2	8
ಎರಡನೇ ಸಲ ವ ಆತರುವಾಯ ಪ್ರತಿ ಆವರ್ತಿಗೂ ಡಿಟೋ ..	1	4

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 347ನೆ ಸೆಕ್ಷನ್ ಅನುಸರಿಸಿ ದಿವಾಳಿ ಅಪ್ಲಿಕೇಷನ್‌ಗಳ ಬಗ್ಯೆ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ	5	0
ಎರಡನೇ ವ ಆತರುವಾಯ ಪ್ರತಿ ದಫಾಕ್ಕೆ	2	8

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 354ನೆ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳಿ ಹುಕುಂಗಳು ಬಗೆರೆ ಚಾರ್ಜ್ ಪ್ರಕಟಿಸಲ್ಪಡುತ್ತವೆ.

ಡ್ಯೂಪ್ಲಿಕೇಟ್ ಕಾಪೀ ಪಟ್ಟೆ ವಗೈರೆ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ ಪುಟ 1ಕ್ಕೆ ..	10	0
ಎರಡನೇ ಸಲ ವ ಆತರುವಾಯ ಪ್ರತಿ ಸಲಕ್ಕೂ ,, ..	5	0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ :—

		ರೂ.	ಆ.
ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ	ಪಟ್ಟಿ 1ಕ್ಕೆ ..	0	8
ಎರಡನೇ ದಫಾ ಡಿಟೋ	ಡಿಟೋ	0	6
ಮೂರನೇ ವ ಆತರುವಾಯ ಪ್ರತಿ ಸಲಕ್ಕೆ ..		0	4

ಪರಾ.—ಗೆಜೆಟ್ ಚಂದಾ ಮತ್ತು ಕೋರ್ಟುಗಳಿಂದ ಕಳುಹಿಸಲ್ಪಡುವ ಪ್ರಕಟಣೆಗಳ ಛಾರ್ಜು ಬಾಬತು ಮೊಬಲಗುಗಳನ್ನು ಸರ್ಕಾರಿ ಖಜಾನೆಗಳು ಜಮೆ ಹಿಡಿಯತಕ್ಕ ಬಗ್ಯೆ ಕಂಟ್ರೋಲರವರ ಅಪ್ಪಣೆ ಆಗಿರುತ್ತೆಯಾದ್ದರಿಂದ ಸದರಿ ಮೊಬಲಗುಗಳನ್ನು ಖಜಾನೆಗೇನೆ ಕಳುಹಿಸಿಕೊಟ್ಟು ಅಲ್ಲಿಂದ ಪಡೆದ ರಶೀತಿಯನ್ನು ಮಾತ್ರ ಆಫೀಸು ಮಜಕೂರಿಗೆ ದಾಖಲೆ ಬಗ್ಯೆ ರವಾನಿಸತಕ್ಕದ್ದು. ಮನಿ ಆರ್ಡರ್ ವಗೈರೆ ಕಳುಹಿಸಿಕೊಟ್ಟಲ್ಲಿ ಅಂಗೀಕರಿಸಲ್ಪಡುವದಿಲ್ಲಾ. ವಾಪಸ್ ಮಾಡಲ್ಪಡುತ್ತೆ.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರ್ ಗವರ್ನಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದಿಗಳು ಇದರಡಿ ರುಜು ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಒಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾನ್ನ 12 ಘಂಟೆ ಒಳಗಾಗಿ ಕಂಪೈಲರ್ ಆಫೀಸಿಗೆ ತಲಪಬೇಕಾಗಿರುತ್ತೆ. ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರಿ ಇಲ್ಲ.

ಡಿ. ಬಿ. ರಾಮಚಂದ್ರ ಮೊದಲಿಯ್ಯಾರ್,
ಛಾರ್ ಕಂಪೈಲರ್, ಮೈಸೂರು ಗೆಜೆಟ್.